ಗೋಕಾಕ್ ತಾಲ್ಲೂಕಿನ ಅಂಕಲಗಿ ಗ್ರಾಮದಲ್ಲಿ ವಾಹನ ನಿಲ್ದಾಣ ಕಟ್ಟಡ ಪ್ರಾರಂಭಿಸುವ ಬಗ್ಗೆ.

೧೬೮೧. ಶ್ರೀ ಎಂ. ಎಲ್. ಮುತ್ತಣ್ಣನವರ್ (ಗೋಕಾಕ್).— ಮಾನ್ಯ ಸಾರಿಗೆ ಮತ್ತು ವಸತಿ ರಾಜ್ಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೇ ?

ಅ) ಗೋಕಾಕ್ ತಾಲ್ಲೂಕಿನ ಅಂಕಲಗಿ ಗ್ರಾಮವು ಬೆಳಗಾವಿ ಹಾಗೂ ಬಾಗಲಕೋಟೆ ಇನ್ನಿತರ ಸ್ಥಳಗಳಿಗೆ ಹೋಗುವ ಮುಖ್ಯ ರಸ್ತೆಯಲ್ಲಿರುವುದರಿಂದ ಈ ಗ್ರಾಮಕ್ಕೆ ವಾಹನ ನಿಲ್ದಾಣ ನಿರ್ಮಿಸುವುದು ಅವಶ್ಯಕವೆಂಬುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಸದರೀ ಗ್ರಾಮದಲ್ಲಿ ವಾಹನ ನಿಲ್ದಾಣಕ್ಕೆಂದು ಸ್ಥಳವನ್ನು ಈಗಾಗಲೇ ಸರ್ಕಾರದವರು ಸ್ವಾಧೀನ ಪಡಿಸಿಕೊಂಡಿರುವುದು ನಿಜವೇ ?

ಇ) ಹಾಗಿದ್ದಲ್ಲಿ ವಾಹನ ನಿಲ್ದಾಣದ ಕಟ್ಟಡದ ಕಾಮಗಾರಿಯನ್ನು ಪ್ರಾರಂಭಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಈ) ಸದರೀ ಕಟ್ಟಡ ನಿರ್ಮಾಣ ಕಾರ್ಯವನ್ನು ಯಾವಾಗ ಪೂರ್ತಿಗೊಳಿಸಲಾಗುವುದು ?

ಶ್ರೀ ಪಿ. ಜಿ. ಆರ್. ಸಿಂಧ್ಯಾ (ವಸತಿ ಮತ್ತು ಸಾರಿಗೆ ರಾಜ್ಯ ಮಂತ್ರಿಗಳು) —

ಅ) ಬಂದಿದೆ,
ಆ) ನಿಜವಲ್ಲ.
ಇ) ಉದ್ಭವಿಸುವುದಿಲ್ಲ.
ಈ) ಉದ್ಭವಿಸುವುದಿಲ್ಲ.

ಸ್ವಯಂ ಉದ್ಯೋಗ ಯೋಜನೆಯಡಿಯಲ್ಲಿ ಹರಿಜನ ಗಿರಿಜನರಿಗೆ ಸಾಲಭ್ಯದ ಬಗ್ಗೆ

೧೬೪೬. ಶ್ರೀ ಪಿ ಸಿ. ಮುನಿಸ್ವಾಮಯ್ಯ (ದೇವನಹಳ್ಳಿ).— ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಎಸ್. ಎಸ್. ಎಲ್. ಸಿ. ಪಾಸಾದವರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ೨೫,೦೦೦ ರೂ.ಗಳ ವರೆವಿಗೂ ಸಾಲ ಕೊಡುವ ವ್ಯವಸ್ಥೆ ಇರುವುದು ನಿಜವೇ ?

ಆ) ಹಾಗಿದ್ದಲ್ಲಿ ಇದುವರೆವಿಗೂ ಈ ಸೌಲಭ್ಯವನ್ನು ಪಡೆದ ಹರಿಜನ ಗಿರಿಜನರ ಸಂಖ್ಯೆ ಎಷ್ಟು ?

ಇ) ಈ ಅಭ್ಯರ್ಥಿಗಳನ್ನು ಆಯ್ಕೆ ಮಾಡುವಾಗ ಶೇಕಡ ೧೮ ರಷ್ಟು ಮೀಸಲಿಡಲಾಗುವುದೇ ?

ಶ್ರೀ ಆರ್. ವಿ. ದೇಶಪಾಂಡೆ (ಸಣ್ಣ ಪ್ರಮಾಣದ ಕೈಗಾರಿಕಾ ರಾಜ್ಯ ಸಚಿವರು).—

ಅ) ನಿಜ.
ಆ) ನಿರ್ದಿಷ್ಟವಾದ ಅಂಕಿ ಅಂಶಗಳು ಲಭ್ಯವಿಲ್ಲ.
ಇ) ಇಲ್ಲ.

ಸ್ವಯಂ ಉದ್ಯೋಗ ಯೋಜನೆಯಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ಫಲಾನುಭವಿಗಳು

೮೮೫. ಶ್ರೀ ಸಿ. ಕಣ್ಣನ (ಶಾಂತಿನಗರ).— ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

೧೯೮೫–೮೬ನೇ ಸಾಲಿನಲ್ಲಿ ಸ್ವಯಂ ಉದ್ಯೋಗ ಯೋಜನೆಯಲ್ಲಿ ೨೫,೦೦೦ ರೂ.ಗಳನ್ನು ಪಡೆದ ಪರಿಶಿಷ್ಟ ಜಾತಿಗೆ ಸೇರಿದ ಫಲಾನುಭವಿಗಳು ಎಷ್ಟು ? (ಜಿಲ್ಲಾವಾರು ಸಂಖ್ಯೆಗಳನ್ನು ಒದಗಿಸುವುದು).

ಶ್ರೀ ಆರ್. ವಿ. ದೇಶಪಾಂಡೆ (ಸಣ್ಣ ಪ್ರಮಾಣದ ಕೈಗಾರಿಕಾ ರಾಜ್ಯ ಸಚಿವರು).—

೧೯೮೫–೮೬ನೇ ಸಾಲಿನಲ್ಲಿ ಸ್ವಯಂ ಉದ್ಯೋಗ ಯೋಜನೆ ಇನ್ನೂ ಪ್ರಗತಿಯಲ್ಲಿದ್ದುದರಿಂದ ನಿಖರವಾದ ಅಂಕಿ ಅಂಶಗಳು ಲಭ್ಯವಿಲ್ಲ.